**ಸೆಕ್ಷನ್ 4(1) (ಬಿ) (viii) ಪ್ರಕಾರ ಜಿಲ್ಲಾ ಪಂಚಾಯ್ತಿಯಲ್ಲಿ ಅಂಗ ಸಂಸ್ಥೆಯಾಗಿ ಅಥವಾ ಸಲಹೆಗಾಗಿ ರಚಿಸಿದ ಎರಡು ಅಥವಾ ಹೆಚ್ಚಿನ ಸದಸ್ಯರಿರುವ ಮಂಡಳಿ, ಪರಿಷತ್, ಸಮಿತಿಗಳು ಮತ್ತು ಇತರೆ ಸಂಸ್ಥೆಗಳ ಬಗ್ಗೆ ಇರುವ ವಿವರ ಮತ್ತು ಅವುಗಳನ್ನು ನಡೆಸುವ ಸಭೆಗೆ ಸಾರ್ವಜನಿಕರಿಗೆ ಮುಕ್ತಾವಕಾಶ ಅಥವಾ ಸಭಾ ನಡವಳಿಗಳ ಲಭ್ಯತೆ ಬಗ್ಗೆ ಇರುವ ವ್ಯವಸ್ಥೆ:–**

1. **ಚುನಾಯಿತ ಪ್ರತಿನಿಧಿಗಳ ಜಿಲ್ಲಾ ಪಂಚಾಯ್ತಿ:**

   ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ–1993 ರ ಪ್ರಕರಣ 158 ರನ್ವಯ ರಚಿತವಾಗಿದ್ದು, ಪ್ರಕರಣ 177 ರಂತೆ ಚುನಾಯಿತ ಸದಸ್ಯರ ಪೈಕಿ ಒಬ್ಬರನ್ನು ಅಧ್ಯಕ್ಷರನ್ನಾಗಿಯೂ, ಇನ್ನೊಬ್ಬರನ್ನು ಉಪಾಧ್ಯಕ್ಷರನ್ನಾಗಿಯೂ ಆಯ್ಕೆಗೊಳಿಸಿ ಪ್ರಕರಣ 159 ರನ್ವಯ ಆಯ್ಕೆಗೊಂಡ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಉಳಿದ ಚುನಾಯಿತ ಜಿಲ್ಲಾ ಪಂಚಾಯತ್ ಸದಸ್ಯರು, ಜಿಲ್ಲೆಯ ವ್ಯಾಪ್ತಿಯೊಳಗಿನ ಎಲ್ಲಾ ಶಾಸನ ಸಭಾ ಸದಸ್ಯರು, ಲೋಕಸಭಾ ಸದಸ್ಯರು, ರಾಜ್ಯ ಸಭಾ ಸದಸ್ಯರು ಮತ್ತು ಎಲ್ಲಾ ತಾಲ್ಲೂಕು ಪಂಚಾಯ್ತಿ ಅಧ್ಯಕ್ಷರುಗಳು ಒಳಗೊಂಡಿರುತ್ತಾರೆ. ಪ್ರಕರಣ 180 ರನ್ವಯ ಮೇಲ್ಕಂಡ ಎಲ್ಲಾ ಸದಸ್ಯರುಗಳ ಭಾಗವಹಿಸುವಿಕೆಯಲ್ಲಿ ಸಾಮಾನ್ಯ ಸಭೆ ನಡೆಸಲಾಗುತ್ತಿದ್ದು, ಈ ಸಭೆಯ ಪದನಿಮಿತ್ತ ಕಾರ್ಯದರ್ಶಿಯಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಾರೆ.

   ಕೆಳಕಂಡ ಸ್ಥಾಯಿ ಸಮಿತಿಗಳು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ–1993 ರ ಪ್ರಕರಣ 186 ರನ್ವಯ ರಚಿತವಾದ ಪ್ರತಿಯೊಂದು ಸಮಿತಿಯಲ್ಲಿ, ಸಮಿತಿಯ ಚುನಾಯಿತಿ ಅಧ್ಯಕ್ಷರನ್ನೊಳಗೊಂಡಂತೆ 7 ಜನ ಸದಸ್ಯರಿರುತ್ತಾರೆ. ಪ್ರಕರಣ 187ಹಾಗೂ 188 ರಂತೆ ಕಾರ್ಯನಿರ್ವಹಿಸುತ್ತವೆ.

. . . . 8)



2. **ಸಾಮಾನ್ಯ ಸ್ಥಾಯಿ ಸಮಿತಿ:–** ಜಿಲ್ಲಾ ಪಂಚಾಯ್ತಿ ಚುನಾಯಿತ ಉಪಾಧ್ಯಕ್ಷರು ಈ ಸಮಿತಿಯ ಅಧ್ಯಕ್ಷರಾಗಿದ್ದು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಸಮಿತಿಯ ಪದನಿಮಿತ್ತ ಕಾರ್ಯದರ್ಶಿಯಾಗಿರುತ್ತಾರೆ.
3. **ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ:–** ಚುನಾಯಿತ ಜಿಲ್ಲಾ ಪಂಚಾಯ್ತಿ ಸದಸ್ಯರುಗಳು ಚುನಾಯಿಸಿದ ಅಧ್ಯಕ್ಷರಿರುತ್ತಾರೆ. ಉಪ ಕಾರ್ಯದರ್ಶಿ(ಆಡಳಿತ) ಜಿಲ್ಲಾ ಪಂಚಾಯ್ತಿ ಇವರು ಸಮಿತಿಯ ಪದನಿಮಿತ್ತ ಕಾರ್ಯದರ್ಶಿಗಳಾಗಿ ಕಾರ್ಯನಿರ್ವಹಿಸುತ್ತಾರೆ.
4. **ಹಣಕಾಸು, ಲೆಕ್ಕಪರಿಶೋಧನಾ ಮತ್ತು ಯೋಜನಾ ಸ್ಥಾಯಿ ಸಮಿತಿ:–** ಜಿಲ್ಲಾ ಪಂಚಾಯ್ತಿ ಅಧ್ಯಕ್ಷರು ಈ ಸಮಿತಿಯ ಅಧ್ಯಕ್ಷರಾಗಿದ್ದು, ಉಪ ಕಾರ್ಯದರ್ಶಿ(ಆಡಳಿತ) ಜಿಲ್ಲಾ ಪಂಚಾಯ್ತಿ ಇವರು ಸಮಿತಿಯ ಪದನಿಮಿತ್ತ ಕಾರ್ಯದರ್ಶಿಗಳಾಗಿರುತ್ತಾರೆ.
5. **ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ:–** ಚುನಾಯಿತ ಜಿಲ್ಲಾ ಪಂಚಾಯ್ತಿ ಸದಸ್ಯರುಗಳು ಚುನಾಯಿಸಿದ ಅಧ್ಯಕ್ಷರಿರುತ್ತಾರೆ. ಈ ಸಮಿತಿಯಲ್ಲಿ ಕನಿಷ್ಟ ಒಬ್ಬ ಮಹಿಳಾ ಸದಸ್ಯರು ಹಾಗೂ ಅನುಸೂಚಿತ ಜಾತಿ: ಅನುಸೂಚಿತ ಪಂಗಡದ ಸದಸ್ಯರೊಬ್ಬರು ಈ ಸಮಿತಿಯಲ್ಲಿರುತ್ತಾರೆ. ಉಪ ಕಾರ್ಯದರ್ಶಿ(ಆಡಳಿತ) ಜಿಲ್ಲಾ ಪಂಚಾಯ್ತಿ ಇವರು ಸಮಿತಿಯ ಪದನಿಮಿತ್ತ ಕಾರ್ಯದರ್ಶಿಗಳಾಗಿ ಕಾರ್ಯನಿರ್ವಹಿಸುತ್ತಾರೆ.

6. **<u>ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ:–</u>** ಚುನಾಯಿತ ಜಿಲ್ಲಾ ಪಂಚಾಯ್ತಿ ಸದಸ್ಯರುಗಳು ಚುನಾಯಿಸಿದ ಅಧ್ಯಕ್ಷರಿರುತ್ತಾರೆ. ಉಪ ಕಾರ್ಯದರ್ಶಿ(ಅಭಿವೃದ್ಧಿ) ಜಿಲ್ಲಾ ಪಂಚಾಯ್ತಿ ಇವರು ಸಮಿತಿಯ ಪದನಿಮಿತ್ತ ಕಾರ್ಯದರ್ಶಿಗಳಾಗಿ ಕಾರ್ಯನಿರ್ವಹಿಸುತ್ತಾರೆ.

ಈ ಸಭೆಗಳಲ್ಲಿ ಸಾರ್ವಜನಿಕರಿಗೆ ಭಾಗವಹಿಸಲು ಮುಕ್ತ ಅವಕಾಶವಿರುವುದಿಲ್ಲ ಜಿಲ್ಲಾ ಪಂಚಾಯ್ತಿ ಸಾಮಾನ್ಯ ಸಭೆಯ ನಡವಳಿಗಳ ಮಾಹಿತಿ ಸಂಗ್ರಹಿಸಲು ಪತ್ರಿಕಾ ಪ್ರತಿನಿಧಿಗಳಿಗೆ ಸಭೆಯಲ್ಲಿ ಉಪಸ್ಥಿತರಿರಲು ಅವಕಾಶ ಕಲ್ಪಿಸಲಾಗಿದೆ. ಈ ಸಭೆಗಳ ಸಭಾ ನಡವಳಿಕೆಗಳು ಸಾರ್ವಜನಿಕರಿಗೆ ಲಭ್ಯವಿರುತ್ತೆ.